ಕರ್ನಾಟಕ ಸರ್ಕಾರ

ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

DTE-ADMIO/EST 9/09/2022/106

ಆಯುಕ್ತರವರ ಕಛೇರಿ,
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ,
ಅರಮನೆ ರಸ್ತೆ, ಬೆಂಗಳೂರು-560 001
ದಿನಾಂಕ: 19-10-2022

## ನೆನಪೋಲೆ

ವಿಷಯ: ಬಯೋಮೆಟ್ರಿಕ್ ಯಂತ್ರದಲ್ಲಿ ಕಡ್ಡಾಯವಾಗಿ ಹಾಜರಾತಿಯನ್ನು ದಾಖಲಿಸುವಂತೆ ಕ್ರಮ ಕೈಗೊಳ್ಳುವ ಬಗ್ಗೆ.

ಉಲ್ಲೇಖ: ತಾಂತ್ರಿಕ ಶಿಕ್ಷಣ ಇಲಾಖೆಯ ಅಧಿಕೃತ ಜಾಲತಾಣದಲ್ಲಿ ಪ್ರಚುರಪಡಿಸಲಾಗಿದ್ದ ಈ ಕಛೇರಿಯ ಸಮಸಂಖ್ಯೆ ಸುತ್ತೋಲೆ ದಿನಾಂಕ; 29-09-2022

********

ವಿಷಯಕ್ಕೆ ಸಂಬಂಧಿಸಿದಂತೆ, ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನಕ್ಕೊಳಪಡುವ ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು/ಪಾಲಿಟೆಕ್ನಿಕ್/ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ ಹಾಗೂ ಬೋಧಕೇತರ ಅಧಿಕಾರಿ/ಸಿಬ್ಬಂದಿ ವರ್ಗದವರಿಗೆ ಬಯೋಮೆಟ್ರಿಕ್ ಹಾಜರಾತಿ ಕಡ್ಡಾಯಗೊಳಿಸುವುದಲ್ಲದೆ ಕೆಲವೊಂದು ಸೂಚನೆಗಳನ್ನು ಪಾಲಿಸುವಂತೆ ಉಲ್ಲೇಖಿತ ಸುತ್ತೋಲೆಯ ಮುಖಾಂತರ ತಿಳಿಸಲಾಗಿತ್ತು,

ಆದಾಗ್ಯೂ ಕೆಲವೊಂದು ಸಂಸ್ಥೆಗಳಲ್ಲಿ ಸೂಚನೆಗಳನ್ನು ಪಾಲಿಸದಿರುವುದು ಕಂಡುಬಂದಿದ್ದು, ಉಲ್ಲೇಖಿತ ಸುತ್ತೋಲೆಯಲ್ಲಿ ಸೂಚಿಸಿರುವಂತೆ ಕ್ರಮವಹಿಸತಕ್ಕದ್ದು ಹಾಗೂ ಈ ಸಂಬಂಧ ಆಯುಕ್ತಾಲಯಕ್ಕೆ ತಪ್ಪದೇ ಪ್ರತಿ ಮಾಹೆಯ ಐದನೇ ತಾರಿಖಿನೊಳಗೆ ವರದಿಯನ್ನು ಸಲ್ಲಿಸತಕ್ಕದ್ದು. ತಪ್ಪಿದಲ್ಲಿ ಮುಂದಿನ ಆಗುಹೋಗುಗಳಿಗೆ ಸಂಬಂಧಪಟ್ಟ ಸಂಸ್ಥೆಯ ಪ್ರಾಂಶುಪಾಲರನ್ನೇ ನೇರ ಹೊಣೆಗಾರರನ್ನಾಗಿಸಿ ಮುಂದಿನ ಕ್ರಮ ಕೈಗೊಳ್ಳಲಾಗುವುದೆಂದು ಸೂಚಿಸಲಾಗಿದೆ.

"ಟಿಪ್ಪಣಿ ಮಾನ್ಯ ಆಯುಕ್ತರವರಿಂದ ಅನುಮೋದಿಸಲ್ಪಟ್ಟಿದೆ"

19/10/22.

**ಜಂಟಿ ನಿರ್ದೇಶಕರು (ಆಡಳಿತ)**
**ತಾಂತ್ರಿಕ ಶಿಕ್ಷಣ ಇಲಾಖೆ**

ಇವರಿಗೆ:

1. ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು/ಪಾಲಿಟೆಕ್ನಿಕ್ ಸಂಸ್ಥೆಗಳು/ಕಿರಿಯ ತಾಂತ್ರಿಕ ಶಾಲೆಗಳ ಪ್ರಾಂಶುಪಾಲರುಗಳ ಮಾಹಿತಿಗಾಗಿ
2. 'ಇ'-ಆಡಳಿತ ವಿಭಾಗ, ತಾಂತ್ರಿಕ ಶಿಕ್ಷಣ ಇಲಾಖೆ ಬೆಂಗಳೂರು-560 001 (ಇಲಾಖಾ WEBSITE ನಲ್ಲಿ ಪ್ರಚುರುಪಡಿಸಲು)

ಪ್ರತಿ:

1. ಆಯುಕ್ತರವರ ಆಪ್ತ ಶಾಖೆಗೆ
2. ನಿರ್ದೇಶಕರವರ ಆಪ್ತ ಶಾಖೆಗೆ
3. ರಿಜಿಸ್ಟ್ರಾರ್ (ಆಡಳಿತ) ಮಾಹಿತಿಗಾಗಿ ಮತ್ತು ಸೂಕ್ತ ಕ್ರಮಕ್ಕಾಗಿ.